# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
## ವಾರ್ಡ್ ಸಮಿತಿ ಸಭೆ ದಿನಾಂಕ: 22/10/2021ರ
## ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ–ಸಭೆ –10/2021–22 ದಿನಾಂಕ: 22.10.2021

ದಿನಾಂಕ: 22.10.2021 ರಂದು ಮಧ್ಯಾಹ್ನ 4.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ–ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀ ಕೃಷ್ಣನಾಯಕ್ | ಕೆಲಸಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |



Scanned with CamScanner

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾರ್ಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು. ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

❖ **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಹೊಸದಾಗಿ ಎಲ್.ಇ.ಡಿ. ವಿದ್ಯುತ್ ದೀಪಗಳನ್ನು ಅಳವಡಿಸಲು ಸಭೆಗೆ ಕೋರಲಾಯಿತು. ಅದರಂತೆ ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡ್‌ನ ವ್ಯಾಪತಿಯಲ್ಲಿ ಹಾಲಿ ಇರುವ ಸೋಡಿಯಂ ವೇಪರ್ ಲ್ಯಾಂಪನ್ನು ತೆರವುಗೊಳಿಸಿ ಆ ಸ್ಥಳದಲ್ಲಿ ಹೊಸ ಎಲ್.ಇ.ಡಿ. ವಿದ್ಯುತ್ ದೀಪಗಳನ್ನು ಅಳವಡಿಸುವ ಯೋಜನೆಯು ಕಾರ್ಯಾದೇಶ ಹಂತದಲ್ಲಿದ್ದು, ಮುಂದಿನ ದಿನಗಳಲ್ಲಿ ಎಲ್.ಇ.ಡಿ. ವಿದ್ಯುತ್ ದೀಪಗಳನ್ನು ಅಳವಡಿಸಲಾಗುವುದೆಂದು ಸಭೆಗೆ ತಿಳಿಸಿದರು.

❖ **ಘನತ್ಯಾಜ್ಯ ನಿರ್ವಹಣೆ ಬಗ್ಗೆ:-** ವಾರ್ಡ್ ನಂ.198ರಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹಾಗೂ ಸುತ್ತಮುತ್ತಲಿನ ಬಡಾವಣೆಗಳಲ್ಲಿ ರಸ್ತೆಯ ಸ್ವಚ್ಛತಾ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಮತ್ತು ಹೆಚ್ಚುರಿಯಾಗಿ ಪೌರ ಕಾರ್ಮಿಕರ ಅವಶ್ಯಕತೆ ಇದೆ ಎಂದು ಸಭೆಯ



Scanned with CamScanner

ಗಮನಕ್ಕೆ ತಂದರು. ಈ ಸಂಬಂಧ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಪ್ರಸ್ತುತ ವಾರ್ಡ್‌ನ ವಿಸ್ತೀರ್ಣ ಸುಮಾರು 30.54 ಚ.ಕಿಲೋ ಮೀಟರ್ ವ್ಯಾಪ್ತಿಯನ್ನು ಒಳಗೊಂಡಿದ್ದು, ಮೈಕ್ರೋ ಪ್ಲಾನ್‌ನ ಅಂಕಿ ಅಂಶಗಳ ಪ್ರಕಾರ 295 ಪೌರ ಕಾರ್ಮಿಕರ ಅವಶ್ಯಕತೆ ಇದ್ದು, ಹಾಲಿ 166 ಪೌರ ಕಾರ್ಮಿಕರು ಕೆಲಸ ನಿರ್ವಹಿಸುತ್ತಿರುತ್ತಾರೆ. ಪೌರ ಕಾರ್ಮಿಕರ ಕೊರತೆಯಿಂದ ವಾರ್ಡ್‌ನಲ್ಲಿ ಸಮರ್ಪಕವಾಗಿ ಸ್ವಚ್ಛತಾ ಕಾರ್ಯ ನಿರ್ವಹಿಸಲು ಸಾಧ್ಯವಾಗುತ್ತಿರುವುದಿಲ್ಲವೆಂದು ಹಾಗೂ ಹೆಚ್ಚುವರಿಯಾಗಿ 120 ಪೌರಕಾರ್ಮಿಕರನ್ನು ನಿಯೋಜಿಸಿಕೊಡಬೇಕೆಂದು ಸಭೆಯ ಗಮನಕ್ಕೆ ತಂದರು.

❖ <u>ಬೆಂಗಳೂರು ಜಲ ಮಂಡಳಿಗೆ ಸಂಬಂಧಿಸಿದ ದೂರಿನ ಬಗ್ಗೆ:-</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಕೆ.ಆರ್.ಎಸ್. ಎಂಡೋವಿಯರ್ ವಸತಿ ಸಮುಚ್ಚಯದ ಮುಂಭಾಗ ಒಳ ಚರಂಡಿ ನೀರು ರಸ್ತೆಗೆ ಹರಿಯುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಜಲಮಂಡಳಿ ಅಧಿಕಾರಿರವರನ್ನು ಕೋರಲಾಯಿತು.

❖ <u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ</u> :- ವಾರ್ಡ್ ನಂ.198ರಲ್ಲಿ ಶ್ರೀ ಕೆ.ಎಂ. ಬೋಪಣ್ಣ ರವರು ವಿಕಲಚೇತನಾರಿದ್ದು, ಹುಟ್ಟಿನಿಂದ ಕಿವುಡರಾಗಿದ್ದು, ಮಾತನಾಡಲು ಬರುವುದಿಲ್ಲ. ಸದರಿಯವರು ಒಂಟಿ ಮನೆ ನಿರ್ಮಾಣಕ್ಕಾಗಿ ಅರ್ಜಿ ಸಲ್ಲಿಸಿದ್ದು 2020-21ನೇ ಸಾಲಿನ ಒಂಟಿ ಮನೆ ಯೋಜನೆಯಡಿ ಪಿ-3829 ರಡಿಯಲ್ಲಿ ಒಂಟಿ ಮನೆಯನ್ನು ಮಂಜೂರುಮಾಡಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಅದರಂತೆ ಸಭೆಯಲ್ಲಿ ಚರ್ಚಿಸಲಾಗಿ ಶ್ರೀ ಕೆ.ಎಂ. ಬೋಪಣ್ಣರವರಿಗೆ ಒಚಿಡಿ ಮನೆಯನ್ನು ನಿರ್ಮಾಣ ಮಾಡಲು ರೂ.5.00 ಲಕ್ಷಗಳನ್ನು ನಿಗಧಿಪಡಿಸಿ ಮಂಜೂರು ಮಾಡಲು ಸಭೆಯಲ್ಲಿ ಒಪ್ಪಿ ತೀರ್ಮಾನಿಸಲಾಯಿತು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

ಸಹಿ/-
(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

<u>ಪ್ರತಿಯನ್ನು</u>:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.



Scanned with CamScanner

2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.ಪ
15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned with CamScanner